**ಕರ್ನಾಟಕ ವಿಧಾನ ಪರಿಷತ್ತು**

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **62**
2. ಮಾನ್ಯ ಸದಸ್ಯರ ಹೆಸರು : **ಶ್ರೀ ಭೀಮ್ ರಾವ್ ಬಸವರಾಜ ಪಾಟೀಲ್, (ಸ್ಥಳೀಯ ಸಂಸ್ಥೆಗಳ ಕ್ಷೇತ್ರ),**
3. ಉತ್ತರಿಸಬೇಕಾದ ದಿನಾಂಕ : **04.03.2025**
4. ಉತ್ತರಿಸುವ ಸಚಿವರು : **ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು.**

*****

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕೃಷಿ ಉತ್ಪನ್ನ ಮಾರುಕಟ್ಟೆಗೆ ಬೇಕಾದ ಸಮರ್ಪಕವಾದ ಸ್ಥಳಾವಕಾಶ ಮತ್ತು ಇತರೆ ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ರೈತರಿಗೆ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡುವುದಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಬೀದರ, ಔರಾದ(ಬಾ), ಹುಮನಾಬಾದ್, ಬಸವಕಲ್ಯಾಣ ಮತ್ತು ಭಾಲ್ಕಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಕಾರ್ಯನಿರ್ವಹಿಸುತ್ತಿವೆ.<br><br>ಬೀದರ್ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ಪ್ರಸ್ತುತ 39 ಎಕರೆ 28 ಗುಂಟೆ ಜಮೀನನ್ನು ಹೊಂದಿದ್ದು, ಸದರಿ ಜಮೀನಿನಲ್ಲಿ ಅವಶ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು, ಸ್ಥಳಾವಕಾಶದ ಕೊರತೆ ಕಂಡು ಬಂದಿರುತ್ತದೆ.<br><br>ಬೀದರ್ ಜಿಲ್ಲೆಯ ಇನ್ನುಳಿದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಈ ಕೆಳಕಂಡ ವಿಸ್ತೀರ್ಣದ ಜಮೀನ್ನು ಹೊಂದಿದ್ದು, ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದ್ದು, ಈ ಮಾರು ಕಟ್ಟೆಗಳಲ್ಲಿ ರೈತರಿಗೆ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡಲು ಸ್ಥಳಾವಕಾಶದ ಕೊರತೆ ಕಂಡು ಬಂದಿರುವುದಿಲ್ಲ.<br><br>1) ಔರಾದ - 45 ಎಕರೆ ವಿಸ್ತೀರ್ಣ.<br>2) ಹುಮನಾಬಾದ್ - 16 ಎಕರೆ 15 ಗುಂಟೆ.<br>3) ಬಸವಕಲ್ಯಾಣ - 16 ಎಕರೆ 8 ಗುಂಟೆ .<br>4) ಭಾಲ್ಕಿ - 36 ಎಕರೆ 37 ಗುಂಟೆ. |

| | | |
|---|---|---|
| (ಆ) | ಬಂದಿದ್ದಲ್ಲಿ, ಈ ಜಿಲ್ಲೆ ಮತ್ತು ತಾಲ್ಲೂಕು ವ್ಯಾಪ್ತಿಯಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಅಭಿವೃದ್ಧಿಪಡಿಸಲು ಕೈಗೊಂಡ ಕ್ರಮವೇನು? (ವಿವರ ಒದಗಿಸುವುದು) | ಬೀದರ್ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ಪ್ರಸ್ತುತ ಹೊಂದಿರುವ 39 ಎಕರೆ 28 ಗುಂಟೆ ಜಮೀನಿನಲ್ಲಿ ಈಗಾಗಲೇ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು, ಇನ್ನೂ ಹೆಚ್ಚಿನ ರೀತಿಯಲ್ಲಿ ಮಾರಾಟ ವ್ಯವಸ್ಥೆಯನ್ನು ಕೈಗೊಳ್ಳಲು ಸ್ಥಳಾವಕಾಶದ ಕೊರತೆ ಕಂಡು ಬಂದಿರುವ ಹಿನ್ನೆಲೆಯಲ್ಲಿ, ಬೀದರ್‌ನ ಸುತ್ತಮುತ್ತ ಕನಿಷ್ಠ 60 ರಿಂದ 80 ಎಕರೆ ಸರ್ಕಾರಿ ಜಮೀನನ್ನು ಉಚಿತವಾಗಿ ನೀಡುವಂತೆ ಕಾರ್ಯದರ್ಶಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಬೀದರ್ ಇವರು ದಿನಾಂಕ: 14-08-2023 ರಂದು ಜಿಲ್ಲಾಧಿಕಾರಿಗಳು, ಬೀದರ್ ಇವರಿಗೆ ಪತ್ರ ಬರೆಯಲಾಗಿರುತ್ತದೆ.<br><br>ಮುಂದುವರೆದು, ನಿರ್ದೇಶಕರು, ಕೃಷಿ ಮಾರಾಟ ಇಲಾಖೆ ರವರು ದಿನಾಂಕ: 11.12.2023 ಮತ್ತು ದಿನಾಂಕ:27.11.2024 ರ ಪತ್ರಗಳಲ್ಲಿ ಬೀದರ್ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಅಧಿಸೂಚಿತ ಕೃಷಿ ಉತ್ಪನ್ನಗಳ ಮಾರುಕಟ್ಟೆ ಪ್ರಾಂಗಣದ ವಿಸ್ತರಣೆಗಾಗಿ ಅನುಮೋದಿತ ದರದ ಶೇ. 50ರ ರಿಯಾಯಿತಿ ದರದಲ್ಲಿ 100 ಎಕರೆ ಜಮೀನನ್ನು ಮಂಜೂರು ಮಾಡುವಂತೆ ಮುಖ್ಯ ಕಾರ್ಯನಿರ್ವಹಣಾಧಿಕಾರಿ, KIADB ಇವರನ್ನು ಕೋರಿದ್ದು ಮುಂದಿನ ಬೆಳವಣಿಗೆ ನಿರೀಕ್ಷಿಸಲಾಗಿದೆ. |

**ಸಂಖ್ಯೆ: ಸಿಒ 43 ಎಂಆರ್‌ಇ 2024**

**(ಶಿವಾನಂದ ಎಸ್. ಪಾಟೀಲ)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು.